ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಪರಿಸರ ಮಾಲಿನ್ಯ ನಿಯಂತ್ರಣ

ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು)

462 (520) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಗಾಳಿ ಮತ್ತು ನೀರಿನಲ್ಲಿ ಹಾನಿಕಾರಕ ವಸ್ತುಗಳ ಪ್ರಮಾಣವೆಷ್ಟು ; (ವಾಯುಮಾಲಿನ್ಯ ಮತ್ತು ಜಲಮಾಲಿನ್ಯದ ಪ್ರಮಾಣದ ವಿವರ ನೀಡುವುದು)

(ಆ) ನಿಯಮಗಳ ಪ್ರಕಾರ ಸಾಮಾನ್ಯ ಮಾಲಿನ್ಯ ಪ್ರಮಾಣವೆಷ್ಟು ; ಈಗ ಇರುವ ಹೆಚ್ಚುವರಿ ಹಾನಿಕಾರಕ ಪ್ರಮಾಣವೆಷ್ಟು ;

(ಇ) ನಗರದಲ್ಲಿ ದಿನೇ ದಿನೇ ಹೆಚ್ಚುತ್ತಿರುವ ಪರಿಸರ ಮಾಲಿನ್ಯದಿಂದಾಗಿ ಜನರು ರೋಗ ರುಜಿನಗಳಿಗೆ ತುತ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ನಗರದಲ್ಲಿ ವಾಯುಮಾಲಿನ್ಯವನ್ನು ತಪ್ಪಿಸಲು ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಸರ್ಕಾರದ ಮುಂದಿರುವ ಯೋಜನೆಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)